# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5)ಪಿಆರ್/62/2021–22

ಮುಖ್ಯ ಆಯುಕ್ತರವರ ಕಛೇರಿ,
ಮಹಾನಗರ ಪಾಲಿಕೆ ಕಛೇರಿಗಳು
ಬೆಂಗಳೂರು, ದಿನಾಂಕ: 28-2-2022

## ಸುತ್ತೋಲೆ

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ಕಛೇರಿಗಳಲ್ಲಿ ನಗದು ಘೋಷಣೆ ವಹಿಯನ್ನು ನಿರ್ವಹಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ರವರ ಸುತ್ತೋಲೆ ಸಂಖ್ಯೆ: ಸಿಆಸುಇ(ಆಸು)21 ಕತವ 2022, ದಿನಾಂಕ:04–02–2022.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ರಿಟ್ ಪಿಟಿಷನ್ ಸಂಖ್ಯೆ: 79/2021 (GM-KLA) ರಲ್ಲಿ ದಿನಾಂಕ:10–11–2021 ರಂದು ನೀಡಿರುವ ನಿರ್ದೇಶನದನ್ವಯ, ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು/ಮಂಡಳಿಗಳು/ನಿಗಮಗಳು ಈ ಕೆಳಗಿನ ಕಾರ್ಯ ವಿಧಾನವನ್ನು ಅನುಸರಿಸಿ, ಈ ಸುತ್ತೋಲೆಗೆ ಲಗತ್ತಿಸಲಾದ ನಿಗಧಿತ ನಮೂನೆಯಲ್ಲಿ "ನಗದು ಘೋಷಣೆ ವಹಿ"ಯನ್ನು ನಿರ್ವಹಣೆ ಮಾಡುವಂತೆ ನಿರ್ದೇಶಿಸಲಾಗಿರುತ್ತದೆ.

ಈ ಸಂಬಂಧ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ಕಛೇರಿಗಳಲ್ಲಿ ಪಾರದರ್ಶಕತೆಯನ್ನು ತರಲು, ತಕ್ಷಣದಿಂದ ಜಾರಿಗೆ ಬರುವಂತೆ ಇನ್ನು ಮುಂದೆ ನಗದು ಘೋಷಣೆ ವಹಿಯನ್ನು ನಿರ್ವಹಿಸಲು ಹಾಗೂ ಈ ಕೆಳಗಿನ ಸೂಚನೆಗಳನ್ನು ಪಾಲಿಸಲು ಸೂಚಿಸಿದೆ.

1. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರತಿಯೊಬ್ಬ ನೌಕರರು ವೈಯಕ್ತಿಕ ನಗದನ್ನು ಗಮನಿಸಲು ಪ್ರತಿ ಕೆಲಸದ ದಿನದ ಪ್ರಾರಂಭದಲ್ಲಿ 'ನಗದು ಘೋಷಣೆ ವಹಿ"ಯನ್ನು ತೆರೆಯತಕ್ಕದ್ದು.
2. ಸರ್ಕಾರಿ ನೌಕರರು ಅಧಿಕೃತ ಸಹಿ ಹಾಜರಾತಿ ವಹಿ/ಎಎಂಎಸ್ ನಲ್ಲಿ ಕೆಲಸದ ದಿನದಂದು ಕರ್ತವ್ಯಕ್ಕೆ ವರದಿ ಮಾಡಿದ ತಕ್ಷಣ, ಅವನು / ಅವಳು ಕಛೇರಿಗೆ ತಂದ ನಗದು ಮೊತ್ತವನ್ನು ನಗದು ಘೋಷಣೆ ವಹಿಯಲ್ಲಿ ತನ್ನ ಸಹಿಯೊಂದಿಗೆ ಘೋಷಿಸತಕ್ಕದ್ದು.
3. ನಗದು ಘೋಷಣೆ ವಹಿಯು ಸಂಬಂಧಪಟ್ಟ ವಿಭಾಗ/ಶಾಖೆಯ ಗ್ರೂಪ್–ಬಿ ಅಧಿಕಾರಿಯ ವಶದಲ್ಲಿರತಕ್ಕದ್ದು ಮತ್ತು ಸದರಿ ಅಧಿಕಾರಿಯು ನೌಕರರು ಮಾಡಿದ ನಮೂದುಗಳ ಸತ್ಯಾಸತ್ಯತೆಯನ್ನು ಪರಿಶೀಲಿಸುವ ಅಧಿಕಾರವನ್ನು ಹೊಂದಿರುತ್ತಾರೆ.
4. ಯಾವುದೇ ನೌಕರರು ನಗದು ಘೋಷಣೆ ವಹಿಯಲ್ಲಿ ಘೋಷಿಸಿದಕ್ಕಿಂತ ಹೆಚ್ಚಿನ ಹಣವನ್ನು ಹೊಂದಿರುವುದು ಕಂಡು ಬಂದರೆ, ಅಂತಹ ಹೆಚ್ಚುವರಿ ಹಣವನ್ನು ಅಕ್ರಮ ಸಂಪಾದನೆ ಎಂದು ಅರ್ಥೈಸಲಾಗುತ್ತದೆ ಹಾಗೂ ಅಂತಹ ಹೆಚ್ಚುವರಿ ಹಣವನ್ನು ಸಕ್ರಮ ಹಣ ಎಂದು ಸಾಬೀತುಪಡಿಸುವುದು ನೌಕರರ ಹೊಣೆಯಾಗಿರುತ್ತದೆ.
5. ನಗದು ಘೋಷಣೆ ವಹಿಯನ್ನು ಕಛೇರಿ ವೇಳೆಯ ಎಲ್ಲಾ ಸಮಯದಲ್ಲಿ ಯಾವುದೇ ಉನ್ನತ/ಸಕ್ಷಮ ಪ್ರಾಧಿಕಾರ / ಘಟಕದ ಮುಖ್ಯಸ್ಥರು / ವಿಭಾಗದ ಮುಖ್ಯಸ್ಥರ ತಪಾಸಣೆಗಾಗಿ ತೆರೆದಿರತಕ್ಕದ್ದು.

ಮೇಲ್ಕಂಡ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಅನುಸರಿಸತಕ್ಕದ್ದು ಹಾಗೂ ಈ ಬಗ್ಗೆ ಯಾವುದೇ ಲೋಪವಿದ್ದಲ್ಲಿ ಗಂಭೀರವಾಗಿ ಪರಿಗಣಿಸಲಾಗುವುದು. (ನಗದು ಘೋಷಣೆಯ ವಹಿಯ ನಮೂನೆಯನ್ನು ಇದರೊಂದಿಗೆ ಲಗತ್ತಿಸಿದೆ.)

28/2/22
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು: ಮಾನ್ಯ ಆಡಳಿತಗಾರರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ. 28/2/22 28/2/22

: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.

: ಎಲ್ಲಾ ವಲಯ ಆಯುಕ್ತರುಗಳಿಗೆ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ವಿಶೇಷ ಆಯುಕ್ತರು (ಆಡಳಿತ/ಯೋಜನೆ/ಹಣಕಾಸು/ಘ.ತ್ಯಾ.ನಿ./ಆರೋಗ್ಯ/ಕಲ್ಯಾಣ/ಆಸ್ತಿಗಳು/ಕಂದಾಯ/ಮಾಹಿತಿ ತಂತ್ರಜ್ಞಾನ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯ ಅಪರ / ಜಂಟಿ ಆಯುಕ್ತರುಗಳಿಗೆ ಮಾಹಿತಿಗೆ ಹಾಗೂ ಅಗತ್ಯ ಕ್ರಮ ಕೈಗೊಳ್ಳಲು ಕಳುಹಿಸಿದೆ.
: ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಕಳುಹಿಸುತ್ತಾ, ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಲಾಗಿದೆ.
: ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಕಳುಹಿಸುತ್ತಾ, ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.
: ಮು.ಲೆ.ಅ/ಮು.ಲೆ.ಪ/ಎಲ್ಲಾ ಉ.ನಿ(ಹಣಕಾಸು) ರವರಿಗೆ ಮಾಹಿತಿಗೆ ಕಳುಹಿಸಿದೆ.
: ಮಾಹಿತಿ ತಂತ್ರಜ್ಞಾನ ಸಲಹೆಗಾರರಿಗೆ ಮಾಹಿತಿಗೆ ಕಳುಹಿಸಿದೆ.
: ಕಛೇರಿ ಪ್ರತಿ.

# ನಗದು ಘೋಷಣೆ ವಹಿ

| ಕ್ರ. ಸಂ. | ಅಧಿಕಾರಿ/ ಸಿಬ್ಬಂದಿಗಳ ಹೆಸರು | | 1 | 2 | 3 | 4 | 5 | 6 | 7 | 8 | 9 | 10 | 11 | 12 | 13 | 14 | 15 | 16 | 17 | 18 | 19 | 20 | 21 | 22 | 23 | 24 | 25 | 26 | 27 | 28 | 29 | 30 | 31 |
|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|
| 1. | | ಮೊತ್ತ<br><br>ಸಹಿ | | | | | | | | | | | | | | | | | | | | | | | | | | | | | | | |
| 2. | | ಮೊತ್ತ<br><br>ಸಹಿ | | | | | | | | | | | | | | | | | | | | | | | | | | | | | | | |